# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:06.02.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.16 ಜಾಲಹಳ್ಳಿಯಲ್ಲಿ ಶ್ರೀ ಹೆಚ್. ಎಸ್. ದಯಾನಂದ, (ಸ.ಕಾ.ನಿ.ಅ,ಕೆಂಗೇರಿ) ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಹಾಜರಿದ್ದವರು:-

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ಹೆಚ್. ಎಸ್. ದಯಾನಂದ | ಸ.ಕಾ.ನಿ.ಅ.. ವಾರ್ಡ್ ನೋಡಲ್ ಅಧಿಕಾರಿಗಳು |
| 2 | ಶ್ರೀ ಗಿರೀಶ ಹೆಚ್. ಎನ್. | ಸಹಾಯಕ ಅಭಿಯಂತರರು. ಸದಸ್ಯ ಕಾರ್ಯದರ್ಶಿ |
| 3 | ಡಾ॥ ಲೀಲಾವತಿ | ವೈದ್ಯಾಧಿಕಾರಿಗಳು. ಪ್ರಾ. ಆ. ಕೇಂ.. ಜಾಲಹಳ್ಳಿ |
| 4 | ಶ್ರೀ ರಘುನಾಥ್ ಟಿ. | ಹಿರಿಯ ಆರೋಗ್ಯ ಪರಿವೀಕ್ಷಕರು |
| 5 | ಶ್ರೀ ರವಿಕುಮಾರ್ ಕೆ. ಆರ್. | ಕಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀ ವೇಣು. | ಕಂದಾಯ ವಸೂಲಿಗಾರರು |
| 7 | ಶ್ರೀ ಚಂದನ್ ಕುಮಾರ್ | ಪಿ.ಎಸ್.ಐ. ಜಾಲಹಳ್ಳಿ ಪೋಲಿಸ್ ಠಾಣೆ |
| 8 | ಶ್ರೀ ಶ್ರೀನಿವಾಸ | ಮೇಲ್ವಿಚಾರಕರು |
| 9 | ಜಾನ್ಸನ್ | ಮೇಲ್ವಿಚಾರಕರು |
| 10 | ನಾಗರಾಜ್ | ಮೇಲ್ವಿಚಾರಕರು |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

### 1) ಒಂಟಿ ಮನೆ ಬಗ್ಗೆ:-

ವಾರ್ಡ್ ನಂ.16, ರಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡ ಹಾಗೂ ಅಲ್ಪಸಂಖ್ಯಾತರಿಗೆ ಕೊಳಚೆ ಪ್ರದೇಶದಲ್ಲಿ ಒಂಟಿ ಮನೆಗಳ ನಿರ್ಮಾಣದ ಬಗ್ಗೆ, ಶ್ರೀಮತಿ ಸುಶೀಲಮ್ಮ ರವರು ಸಿದ್ಧಾರ್ಥನಗರದಲ್ಲಿ ಮನೆ ನಿರ್ಮಾಣಕ್ಕೆ ಸಲ್ಲಿಸಿರುವ ಮನವಿಯನ್ನು ವಾರ್ಡ್ ಸಮಿತಿಯ ಸಭೆಯಲ್ಲಿ ಶೇ.24.10 ಅಡಿಯಲ್ಲಿ ಮನೆಯನ್ನು ನಿರ್ಮಾಣ ಮಾಡಲು ಒಪ್ಪಿಗೆ ಸೂಚಿಸಲಾಯಿತು.

### 2) ಕೋವಿಡ್-19 ಲಸಿಕೆ ಬಗ್ಗೆ:-

ಕೊರೊನಾ ವಾರಿಯರ್ಸ್‌ಗಳಾದ ಆರೋಗ್ಯ ಸಿಬ್ಬಂದಿಗಳು ಹಾಗೂ ಪಾಲಿಕೆ ಸಿಬ್ಬಂದಿಗಳು ಕೋವಿಡ್ ಚುಚ್ಚುಮದ್ದು ತೆಗೆದುಕೊಂಡಿರುವ ಬಗ್ಗೆ ಅಧ್ಯಕ್ಷರು ವೈದ್ಯಾಧಿಕಾರಿಗಳೊಂದಿಗೆ ಚರ್ಚಿಸಿದರು.

**3) ಬೆಸ್ಕಾಂ ಇಲಾಖೆ:-**

ಬೆಸ್ಕಾಂನವರು ಕಟಾವು ಮಾಡಿದ ಮರಗಳ ರೆಂಬೆಗಳನ್ನು ತೆರವುಗೊಳಿಸುವ ಬಗ್ಗೆ ಮಾನ್ಯ ಅಧ್ಯಕ್ಷರು ಮಾತನಾಡಿ, ಪ್ರಸ್ತಾಪಿತ ವಿಷಯದ ಬಗ್ಗೆ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಕಿರಿಯ ಅಭಿಯಂತರರಿಗೆ ಕೂಡಲೇ ಕ್ರಮವಹಿಸಲು ಸೂಚಿಸಿರುತ್ತಾರೆ.

**4) ಕಾಮಗಾರಿ ಇಲಾಖೆ:-**

- **ಎಂದಿನಂತೆ 'ಸಹಾಯ 2.0' ಕೋಶದಲ್ಲಿ ದಾಖಲಾಗುವ ಸಾರ್ವಜನಿಕರ ದೂರುಗಳನ್ನು ವಿಲೇ ಮಾಡುವ ಬಗ್ಗೆ ಚರ್ಚಿಸಲಾಗಿದ್ದು,** ಕಾಮಗಾರಿ ಇಲಾಖೆಗೆ ಸಂಬಂಧಪಟ್ಟ ದೂರುಗಳು ಬಾಕಿ ಇದ್ದು, ಇದರ ಬಗ್ಗೆ ವಾರ್ಡ್ ಸಹಾಯಕ ಅಭಿಯಂತರರು ಮಾತನಾಡಿ, ದೂರುಗಳನ್ನು ಶೀಘ್ರವಾಗಿ ಪರಿಹರಿಸುವುದಾಗಿ ಸಭೆಗೆ ತಿಳಿಸಿರುತ್ತಾರೆ.

**5) ಘನತ್ಯಾಜ್ಯಗಳ ನಿರ್ವಹಣೆ ಕುರಿತು:-**

ಮಾನ್ಯ ಅಧ್ಯಕ್ಷರು ಮಾತನಾಡಿ ಘನತ್ಯಾಜ್ಯವನ್ನು ಒಣ ಕಸ ಮತ್ತು ಹಸಿ ಕಸವಾಗಿ ವಿಂಗಡಿಸಲು ಕಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಮೇಲ್ವಿಚಾರಕರಿಗೆ ಸೂಚಿಸಿದರು. ಇದಕ್ಕೆ ಮೇಲ್ವಿಚಾರಕರು ಮಾತನಾಡಿ, ತ್ಯಾಜ್ಯವನ್ನು ಒಣ ಕಸ, ಹಸಿ ಕಸ ವಿಂಗಡಿಸಲು ನಮ್ಮ ಬಳಿ ಪೌರ ಕಾರ್ಮಿಕರ ಕೊರತೆಯಿದ್ದು, ಆಟೋಗಳಿಗೆ ಒಬ್ಬ ಡ್ರೈವರ್ ಮತ್ತು ಒಬ್ಬ ಹೆಲ್ಪರ್ ನಿಯೋಜಿಸಿಕೊಡಬೇಕೆಂದು ಅಧ್ಯಕ್ಷರಲ್ಲಿ ಮನವಿ ಮಾಡಿದರು. ಅದಕ್ಕೆ ಅಧ್ಯಕ್ಷರು ಮಾತನಾಡಿ, ತಮ್ಮಲ್ಲಿ ಲಭ್ಯವಿರುವ ಪೌರ ಕಾರ್ಮಿಕರ ಸಹಯೋಗದೊಂದಿಗೆ ವಿಂಗಡಣೆ ಮಾಡಲು ಸೂಚಿಸಿದರು.

ಖಾತಾ ನಗರ ಮತ್ತು ಸಿದ್ದಾರ್ಥನಗರ ಸ್ಲಂಗಳಲ್ಲಿ ಪೌರ ಕಾರ್ಮಿಕರ ಕೊರತೆಯಿದ್ದು, ವಾರಕ್ಕೊಮ್ಮೆ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಂಡು, ಸ್ಲಂ ಪ್ರದೇಶವನ್ನು ಶುಚಿಯಾಗಿಡಲು ಸೂಚಿಸಿದರು.

ಕೊನೆಯದಾಗಿ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್ ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಗಿರೀಶ ಹೆಚ್. ಎನ್.)
ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:16

(ಹೆಚ್. ಎಸ್. ದಯಾನಂದ)
ಸ.ಕಾ.ನಿ.ಅ. ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:16